ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸವನ್ನು ಅರ್ಧಕ್ಕೆ ಮೊಟಕುಗೊಳಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ವೆಂಕಟಾಪುರ ಮತ್ತು ಸಲಗರ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಯನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಂದಿದೆ.

ಆ) ಹೊಸದಾಗಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಕಳುಹಿಸಲಾಗಿದ್ದು, ಸಹಮತಿ ದೊರೆತ ನಂತರ ಅಗತ್ಯತೆಯ ಆಧಾರದ ಮೇರೆಗೆ ಹೊಸ ಪ್ರೌಢ ಶಾಲೆಗಳನ್ನು ಮಂಜೂರು ಮಾಡಲು ಕ್ರಮ ವಹಿಸಲಾಗುವುದು.

ಹೊಸದಾಗಿ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾರಂಭ

1446(1561), ಡಾ॥ ಉಮೇಶ್ ಜಿ.ಜಾಧವ್(ಚಿಂಚೋಳಿ)

ಅ) ಚಿಂಚೋಳಿಯಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್ ಇಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು? (ವಿವರ ನೀಡುವುದು)

ಶ್ರೀ ಆರ್.ವಿ.ದೇಶಪಾಂಡೆ(ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ. ವಿದ್ಯಾರ್ಥಿಗಳ ಸಂಖ್ಯೆ, ಜಮೀನಿನ ಲಭ್ಯತೆ, ಹಣಕಾಸಿನ ಅಗತ್ಯತೆ ಹಾಗೂ ಕೇಂದ್ರ ಸರ್ಕಾರದ (ಎ.ಐ.ಸಿ.ಟಿ.ಇ) ಅನುಮತಿ ಅನುಸಾರ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.